**ದಿನಾಂಕಃ 24-04-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

**ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಪಾಟೀ ಸವಾಲುಃ1 ನೇ ಎದುರುದಾರರ ಪರ ಶ್ರೀ.ಪಿಬಿಜಿ ಪರವಾಗಿ ಶ್ರೀ ಸಿಯುಕೆ.ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ತಯಾರಿಸಲು ನಾನೇ ಮಾಹಿತಿ ಕೊಟ್ಟಿರುತ್ತೇನೆ. ಅಪಘಾತ ಲಾರಿ ಚಾಲಕನ ತಪ್ಪಿನಿಂದ ಆಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-10 ರಿಂದ 16 ದಾಖಲೆಗಳನ್ನು ಈ ಕೇಸಿಗೊಸ್ಕರ ಸೃಷ್ಟಿ ಮಾಡಿ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ರಾಣೇಬೆನ್ನೂರು ಗ್ರಾಮೀಣ ಪೋಲಿಸ್ ಠಾಣೆಯವರು ನನ್ನ ತಪ್ಪಿನಿಂದಲೇ ಅಪಘಾತವಾಗಿದೆ ಎಂದು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿ ನಾನು ಆ ಕೇಸನ್ನು ಚಾಲೆಂಜ್ ಮಾಡಿರುತ್ತೇನೆ ಎಂದು ಹೇಳುತ್ತಾರೆ. ಅಪಘಾತ ಪಡಿಸಿದ ಲಾರಿ ಚಾಲಕನಿಗೆ ಡಿಎಲ್ ಇತ್ತು ಮತ್ತು ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಒಂದು ವೇಳೆ ನನಗೆ ಪರಿಹಾರ ನೀಡಬೇಕು ಎಂದು ಆದರೆ ಅದು 2 ನೇ ಎದುರುದಾರರ ಕಂಪನಿಯವರೇ ಪರಿಹಾರ ನೀಡಬೇಕು ಎಂದರೆ ಸಾಕ್ಷಿ ಎದುರುದಾರರು ಇಬ್ಬರು ಪರಿಹಾರ ಕೊಡಬೇಕು ಎಂದು ಹೇಳುತ್ತಾರೆ. ನಾನು ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.